**ಸಾಕ್ಷಿಗೆ ದಿನಾಂಕ 17-02-2026 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ: 2 ನೇ ಎದುರುದಾರರ ಪರ ಶ್ರೀ ಡಿ ಆರ್ . ವಕೀಲರಿಂದಃ**

ನನ್ನ ಮುಖ್ಯ ವಿಚಾರಣಾ ಸಾಕ್ಷಾ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಅರ್ಜಿದಾರರ ಅರ್ಜಿಯನ್ನು ವಜಾ ಮಾಡಬೇಕೆಂದು ಪಾರ್ಥಿಸಿಕೊಳ್ಳುತ್ತೇನೆ.

**ಪಾಟೀಸವಾಲುಃ ಅರ್ಜಿದಾರರ ಪರ ಶ್ರೀ ಎನ್ ಎಂ ವಕೀಲರಿಂದಃ**

1. ನಾನು ಪೊಲೀಸ್ ದಾಖಲೆಗಳ ಆಧಾರದ ಮೇರೆಗೆ ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ. ನನ್ನ ಮುಖ್ಯ ವಿಚಾರಣಾ ಪ್ರಮಾಣಪತ್ರದಲ್ಲಿ ಒಂದನೇ ಎದುರುದಾರರ ವಾಹನವನ್ನು ತಪ್ಪಾಗಿ ಸೇರಿಸಲಾಗಿದೆ ಎಂದು ಹೇಳಲಾಗಿದ್ದು ಅದಕ್ಕೆ ಸಂಬಂಧಿಸಿದಂತೆ ದೂರನ್ನು ನೀಡಿದ್ದೀರಾ ಎಂದರೆ ಇಲ್ಲ. ಅಪಘಾತದ ಕುರಿತು ಒಂದನೇ ಎದುರುದಾರರ ವಾಹನದ ಮಾಲೀಕರನ್ನಾಗಲೀ ಅಥವಾ ಚಾಲಕನನ್ನಾಗಲೀ ವಿಚಾರಣೆ ಮಾಡಿದ್ದೀರಾ ಎಂದರೆ ಒಂದನೇ ಎದುರುದಾರರ ವಾಹನದ ಅಪಘಾತದಲ್ಲಿ ಭಾಗಿಯಾಗಿರುವುದಿಲ್ಲ. ಒಂದನೇ ಎದುರುದಾರರ ವಾಹನದ ಮೇಲೆ ಪೊಲೀಸರು ದೋಷಾರೋಪಣಾಪಟ್ಟಿ ಸಲ್ಲಿಸಿದ್ದಾರೆ ಎಂದರೆ ಸರಿ, ಸಾಕ್ಷಿ ಮುಂದುವರೆದು ತಪ್ಪಾಗಿ ಸಲ್ಲಿಸಿರುತ್ತಾರೆ. ಸದರಿ ದೋಷಾರೋಪಣಾಪಟ್ಟಿಯನ್ನು ಪ್ರಶ್ನಿಸಿರುವುದಿಲ್ಲ. ವಿಮಾ ಪರಿಹಾರ ನೀಡುವ ಬಾಧ್ಯತೆಯಿಂದ ತಪ್ಪಿಸಿಕೊಳ್ಳುವ ಸಲುವಾಗಿ ಸುಳ್ಳು ಪ್ರಮಾಣಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಒಂದನೇ ಎದುರುದಾರರು ಏಕ-ಪಕ್ಷೀಯ. ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು-ವಿಚಾರಣೆಇಲ್ಲ.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**